# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 875 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 18-12-2018 |
| ಉತ್ತರಿಸಬೇಕಾದ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಯಚೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜಿನಿಯರಿಂಗ್ ಘಟಕದಿಂದ ರಾಯಚೂರು ಜಿಲ್ಲೆಯಲ್ಲಿ 17 ಪ್ರಾಥಮಿಕ ಆರೋಗ್ಯ ಕೇಂದ್ರ ನಿರ್ಮಾಣ ಕಾಮಗಾರಿಗಳನ್ನು ಕೈಗೊಂಡಿದ್ದು, ಅದರಲ್ಲಿ 12 ಕಾಮಗಾರಿಗಳನ್ನು ಪೂರ್ಣಗೊಳಿಸಿ ಉಪಯೋಗಿ ಇಲಾಖೆಗೆ ಹಸ್ತಾಂತರಿಸಲಾಗಿದೆ. ಉಳಿದ 5 ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. ಕಾಮಗಾರಿಯ ವಿವರಗಳನ್ನು ಅನುಬಂಧ-1 ರಲ್ಲಿ ನೀಡಲಾಗಿದೆ. |
| ಆ) | ರಾಯಚೂರು ಜಿಲ್ಲೆಯಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡು ಕ್ರಮಗಳೇನು; | ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡ ಕ್ರಮದ ಬಗ್ಗೆ ಅನುಬಂಧ-2 ರಲ್ಲಿ ನೀಡಲಾಗಿದೆ. |
| ಇ) | ಮಾನ್ವಿ ಪಟ್ಟಣದಲ್ಲಿ ಮಂಜೂರಾತಿಗಿರುವ ಎಂಸಿಹೆಚ್ ಆಸ್ಪತ್ರೆಯ ಕಾಮಗಾರಿ ಪೂರ್ತಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಮಾನ್ವಿ ಪಟ್ಟಣದಲ್ಲಿ ಎಂಸಿಹೆಚ್ ಆಸ್ಪತ್ರೆಯ ನಿರ್ಮಾಣ ಕಾಮಗಾರಿಗೆ ಎನ್‌ಹೆಚ್‌ಎಂ ಯೋಜನೆಯಡಿಯಲ್ಲಿ ರೂ.1100.00 ಲಕ್ಷಗಳ ಅಂದಾಜು ಮೊತ್ತಕ್ಕೆ ಅಧಿಕೃತ ಜ್ಞಾಪನಾ ಸಂಖ್ಯೆ: MD/NHM/AA/ 1688/2017-18 ದಿನಾಂಕ: 10.10.2017 ರಂದು ಅಭಿಯಾನ ನಿರ್ದೇಶಕರು, ಎನ್‌ಹೆಚ್‌ಎಂ ರವರು ಆಡಳಿತಾತ್ಮಕ ಅನುಮೋದನೆ ನೀಡಿರುತ್ತಾರೆ. ಸದರಿ ಕಾಮಗಾರಿಗೆ ನಿಯಮಾನುಸಾರ ಟೆಂಡರ್ ಆಧಾರದ ಮೇಲೆ ಗುತ್ತಿಗೆದಾರರಿಗೆ ದಿನಾಂಕ: 05.03.2018 ರಂದು ಕಾರ್ಯಾದೇಶ ನೀಡಿದೆ. ಪ್ರಸ್ತುತ ಸದರಿ ಆಸ್ಪತ್ರೆ ನಿರ್ಮಾಣ ಕಾಮಗಾರಿಯ ನೆಲಮಹಡಿ, ಮೊದಲನೇ ಮಹಡಿ, ಎರಡನೇ ಮಹಡಿ & ಮೂರನೇ ಮಹಡಿ ಮೇಲ್ಛಾವಣಿ ಹಾಗೂ ನೆಲಮಹಡಿ & ಮೊದಲನೇ ಮಹಡಿ ಗೋಡೆ ಕೆಲಸ ಮುಗಿದಿದೆ. ನೆಲಮಹಡಿ & ಮೊದಲನೇ ಮಹಡಿಯ ಪ್ಲಾಸ್ಟರಿಂಗ್ ಕೆಲಸ ಹಾಗೂ ಎರಡನೇ ಮಹಡಿಯ ಗೋಡೆ ಕೆಲಸ ಪ್ರಗತಿಯಲ್ಲಿರುತ್ತದೆ. ಸದರಿ ಕಾಮಗಾರಿಗೆ ಇದುವರೆಗೂ ರೂ.591.94 ಲಕ್ಷಗಳನ್ನು ವೆಚ್ಚ ಮಾಡಲಾಗಿದ್ದು, ಜೂನ್ 2019ರ ಒಳಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ. |
| ಈ) | ರಾಯಚೂರು ನಗರದಲ್ಲಿ ಎಂಸಿಹೆಚ್ ಆಸ್ಪತ್ರೆ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದಲ್ಲಿಯಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ರಾಯಚೂರು ನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ 100 ಹಾಸಿಗೆ ಸಾಮರ್ಥ್ಯದ ಎಂಸಿಹೆಚ್ ಆಸ್ಪತ್ರೆ ಪ್ರಾರಂಭಿಸಲು ರಾಷ್ಟ್ರೀಯ ಆರೋಗ್ಯ ಅಭಿಯಾನದ 2018-19 ನೇ ಸಾಲಿನ Supplementary PIP ಯಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಅನುದಾನದ ಲಭ್ಯತೆಗೆ ಅನುಗುಣವಾಗಿ ನಿಯಮಾನುಸಾರ ರಾಯಚೂರು ನಗರದಲ್ಲಿ ಎಂಸಿಹೆಚ್ ಆಸ್ಪತ್ರೆ ನಿರ್ಮಾಣ ಕಾಮಗಾರಿ ಕೈಗೊಳ್ಳಲು ಕ್ರಮ ವಹಿಸಲಾಗುವುದು. |

ಸಂಖ್ಯೆ: ಆಕುಕ 875 ವಿ.ಪ. 2018

(ಶಿವಾನಂದ ಎಸ್. ಪಾಟೀಲ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ಅನುಬಂಧ-1

| Sl. No | Name of work | Estimated cost | Remarks |
|---|---|---|---|
| 1 | Construction of PHC at Nagarala (in lieu of Makapura) in Lingasugur Tq, Raichur Dt. | 140.00 | Work completed |
| 2 | Construction of PHC & staff quarters at Sajjalagudda, Raichur District | 225.00 | Work completed |
| 3 | Construction of PHC at Gobbur in Devdurga taluk of Raichur District | 117.00 | Work completed |
| 4 | Construction of PHC at Byagwat in Manvi taluk of Raichur District | 117.00 | Work completed |
| 5 | Construction of PHC at Chinchodi in Devdurga taluk of Raichur District | 120.00 | Work completed |
| 6 | Construction of PHC at Paparaocamp in Sindhanur Taluk Raichur District (in lieu of M.Sugur with qtrs in Siruguppa Tq) | 225.00 | PHC Completed upto plinth level & MO Quarters Basement work under progress |
| 7 | Construction of PHC & staff quarters at Salagunda in Sindhanur Tq, Raichur District | 225.00 | PHC Tiles and flooring work in progress . All quarters Fabrication of roof slab under progress |
| 8 | Construction of PHC & Staff quarters at Ganadal in Raichur Tq & Dist | 205.79 | Work completed |
| 9 | Construction of PHC & Staff quarters at Udumgal Khanapur in Raichur Tq & Dist | 205.79 | Work completed |
| 10 | Construction of PHC & Staff quarters at Idapanur in Raichur Tq & Dist | 205.79 | Work completed |
| 11 | Construction of PHC & Staff quarters at Chandrabanda in Raichur Tq & Dist | 205.79 | Work completed |
| 12 | Construction of PHC & Staff quarters at Kalmala in Raichur Tq & District (in lieu of PHC at Koppara of Deodurga Tq, Raichur Dt.) | 205.79 | Work completed |
| 13 | Construction of PHC & Staff quarters at Badarali in Sindhanur Tq, Raichur Dist | 205.79 | PHC flooring work completed Painting and electrical works is in progress. Quarters flooring work is in progress. |
| 14 | Construction of PHC & Staff quarters at RH NO-2 in Sindhanur Tq, Raichur Dist | 205.79 | PHC Tiles and flooring work under progress Quarters BBM work under progress |
| 15 | Construction of PHC & Staff quarters at Yapaldinni in Raichur Tq & District ( in lieu of PHC at Salgunda of Sindhaunr Tq, Raichur Dt.) | 205.79 | Work completed |
| 16 | Construction of PHC & Staff quarters at Kallur in Manvi Tq, Raichur District | 205.79 | PHC Plastering under progress. Group-D & Nurse Qtr BBM in progress & DR Quarters site not handed over. |
| 17 | Construction of PHC & Staff quarters at Hatti in Lingasugur Tq of Raichur District ( in lieu of PHC at Makapura of Lingasugur Tq, Raichur Dt.) | 205.79 | Work completed |

Chief Engineer,
Engineering Wing, H&FWD
Bengaluru

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 875ಕ್ಕೆ ಅನುಬಂಧ–2

ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ.

- ಇಲಾಖೆಯಲ್ಲಿ ಖಾಲಿ ಇರುವ 365+111=476 (ಈ ಪೈಕಿ 111–ಹೈ–ಕರ್ನಾಟಕ) ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕೋರಲಾಗಿತ್ತು, ಆದರೆ 457 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಅಂತಿಮ ಪಟ್ಟಿ ಪ್ರಕಟಣೆಗೊಂಡಿದ್ದು, ಆದರಲ್ಲಿ 260 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಕೌನ್ಸಿಲಿಂಗ್‌ಗೆ ಹಾಜರಾಗಿದ್ದು, ಈ ಪೈಕಿ 255 ವೈದ್ಯರು ನೇಮಕಾತಿ ಆದೇಶ ಪಡೆದು, ದಿನಾಂಕ: 04–09–2018 ರಿಂದ 230 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಪ್ರಸುತ ಕಾರ್ಯನಿರ್ವಹಿಸುತ್ತಿದ್ದಾರೆ.
- ಇಲಾಖೆಯಲ್ಲಿ ಖಾಲಿ ಇರುವ 1065 ತಜ್ಞ ವೈದ್ಯರನ್ನು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕೋರಲಾಗಿತ್ತು, ಆದರೆ 382 ತಜ್ಞ ವೈದ್ಯರ ಅಂತಿಮ ಪಟ್ಟಿ ಪ್ರಕಟಣೆಗೊಂಡಿದ್ದು, ಆದರಲ್ಲಿ 265 ತಜ್ಞ ವೈದ್ಯರು ಕೌನ್ಸಿಲಿಂಗ್‌ಗೆ ಹಾಜರಾಗಿದ್ದು, ಈ ಪೈಕಿ 255 ತಜ್ಞ ವೈದ್ಯರು ನೇಮಕಾತಿ ಆದೇಶ ಪಡೆದು, ದಿನಾಂಕ: 16–07–2018 ರಿಂದ 156 ತಜ್ಞ ವೈದ್ಯರು ಪ್ರಸುತ ಕಾರ್ಯನಿರ್ವಹಿಸುತ್ತಿದ್ದಾರೆ.
- ವೈದ್ಯರ ನೇಮಕಾತಿ ಸಮಾಲೋಚನೆ ನಂತರ ಹೆಚ್ಚಿನ ವೈದ್ಯರು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೆ ಇರುವುದರಿಂದ ಕೆಪಿಎಸ್‌ಸಿ ಯಿಂದ ತಜ್ಞ ವೈದ್ಯರು ಮತ್ತು ಸಾ.ಕ.ವೈದ್ಯಾಧಿಕಾರಿಗಳ ಹೆಚ್ಚುವರಿ ಪಟ್ಟಿಯನ್ನು ಕಳುಹಿಸಿಕೊಡುವಂತೆ ಕರ್ನಾಟಕ ಲೋಕಸೇವಾ ಆಯೋಗಕ್ಕೆ ದಿ:01.12.2018 ರಂದು ಪತ್ರ ಬರೆಯಲಾಗಿದೆ.
- ಇಲಾಖೆಯಲ್ಲಿ ತಜ್ಞರು ಹಾಗೂ ವೈದ್ಯಾಧಿಕಾರಿಗಳ ಕೊರತೆ ಇರುವುದರಿಂದ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲು ಸಾಧ್ಯವಾಗಿರುವುದಿಲ್ಲ. ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕಾಲಕಾಲಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ.
- ಖಾಲಿ ಇರುವ ತಜ್ಞ ವೈದ್ಯರನ್ನು ಎನ್.ಹೆಚ್.ಎಂ ಅಡಿಯಲ್ಲಿ ಗುತ್ತಿಗೆ ಆಧಾರದಲ್ಲಿ ಹಾಗೂ ಕರೆ ಆಧಾರದಲ್ಲಿ (on call basis) ಸಹ ನೇಮಕಾತಿ ಮಾಡಲು ಅವಕಾಶ ಕಲ್ಪಿಸಿದೆ.
- ಹಾಗೆಯೇ, ವಯೋನಿವೃತ್ತಿ ಹೊಂದಿದ ತಜ್ಞರು ಹಾಗೂ ವೈದ್ಯರನ್ನು 65 ವರ್ಷ ವಯಸ್ಸಿನವರೆಗೆ ಪ್ರತೀ ವರ್ಷ ನವೀಕರಿಸುವ ಷರತ್ತಿಗೊಳಪಟ್ಟು ಗುತ್ತಿಗೆ ಆಧಾರದಲ್ಲಿ ಮರು ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದೆ.
- ಎಂ.ಬಿ.ಬಿ.ಎಸ್. ಪದವಿಯನ್ನು ಸರ್ಕಾರಿ ಕೋಟಾದಲ್ಲಿ ಪೂರ್ಣಗೊಳಿಸಿದ ವೈದ್ಯರುಗಳನ್ನು ಒಂದು ವರ್ಷ ಕಡ್ಡಾಯ ಗ್ರಾಮೀಣ ಸೇವೆಯಡಿಯಲ್ಲಿ ಸೇವೆ ಸಲ್ಲಿಸಲು ನೇಮಿಸಲಾಗುತ್ತಿದೆ ಹಾಗೂ ವೈದ್ಯರುಗಳನ್ನು ಖಾಲಿ ಹುದ್ದೆಗೆ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲಾಗುತ್ತಿದೆ.

- ಕಿರಿಯ ವೈದ್ಯಕೀಯ ಪ್ರಯೋಗಶಾಲಾ ಟೆಕ್ನಾಲಜಿಸ್ಟ್/ಫಾರ್ಮಾಸಿಸ್ಟ್/ ಎಲೆಕ್ಟ್ರೀಷಿಯನ್ / ಸೋಷಿಯಲ್ ವರ್ಕರ್/ಡೆಂಟಲ್ ಮೆಕ್ಯಾನಿಕ್/ ಗ್ರೂಪ್-ಡಿ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಸರ್ಕಾರದಿಂದ ಅನುಮತಿ ನೀಡಲಾಗಿದೆ.

- ಇಲಾಖೆಯ ವಿಶೇಷ ನೇರ ನೇಮಕಾತಿ ಸಮಿತಿ ಮುಖಾಂತರ 2017-18ನೇ ಸಾಲಿನಲ್ಲಿ ವಿವಿಧ ಅರೆ ವೈದ್ಯಕೀಯ ಹುದ್ದೆಗಳಲ್ಲಿ 1665 ಹುದ್ದೆಗಳನ್ನು ನೇಮಕಾತಿ ಮಾಡಿ ಆದೇಶ ಹೊರಡಿಸಲಾಗಿದೆ.

- ಕಿರಿಯ ಆರೋಗ್ಯ ಸಹಾಯಕರು (ಮಹಿಳೆ) -496 ಹುದ್ದೆಗಳಿಗೆ ಪೊಲೀಸ್ ಪೂರ್ವಾಪರ / ಜಾತಿ ಸಿಂಧುತ್ವ / ಹೈ-ಕ ಮೀಸಲಾತಿ ಸಿಂಧುತ್ವ ವರದಿಗಳು ಸ್ವೀಕೃತವಾದ ನಂತರ ಹಂತ ಹಂತವಾಗಿ ನೇಮಕಾತಿ ಆದೇಶ ನೀಡಲಾಗುವುದು ಮತ್ತು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು-62 ಹುದ್ದೆಗಳಿಗೆ ಹೊರ ರಾಜ್ಯದ ಆದೇಶ ನೀಡಲಾಗುವುದು ಮತ್ತು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು-62 ಹುದ್ದೆಗಳಿಗೆ ಹೊರರಾಜ್ಯದ ವಿಶ್ವವಿದ್ಯಾನಿಲಯಗಳಿಂದ ಪದವಿ ಪಡೆದಿರುವ ಅಭ್ಯರ್ಥಿಗಳ ಅಂಕಪಟ್ಟಿಗಳ ನೈಜತೆಯ ಬಗ್ಗೆ ಪತ್ರ ಬರೆಯಲಾಗಿದ್ದು, ಸ್ಪಷ್ಟ ಮಾಹಿತಿ ಬಂದ ನಂತರ ತಾತ್ಕಾಲಿಕ ಆಯ್ಕೆಪಟ್ಟಿ ತಯಾರಿಸಲಾಗುವುದು ಹಾಗೂ 889 ಶುಶ್ರೂಷಕರ ಹುದ್ದೆಗಳನ್ನು ಭರ್ತಿ ಮಾಡಲ ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ದಾವೆ ಹೂಡಿದ್ದು, ಸದರಿ ನ್ಯಾಯಾಲಯದಲ್ಲಿ ತಡೆಯಾಜ್ಞೆ ಆದೇಶ ಇರುವ ಹಿನ್ನೆಲೆಯಲ್ಲಿ ಅಂತಿಮ ತೀರ್ಪು ಬಂದ ನಂತರ ನೇಮಕಾತಿ ಪ್ರಕ್ರಿಯೆ ಚಾಲನೆಗೊಳಿಸಲಾಗುವುದು.

- ಇಲಾಖೆಯಲ್ಲಿ ಖಾಲಿ ಇರುವ 177 ಪ್ರಥಮ ದರ್ಜೆ ಸಹಾಯಕರು ಮತ್ತು 143 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಅನುಮೋದನೆ ದೊರೆತಿದ್ದು, ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಭರ್ತಿ ಮಾಡುವ ಸಲುವಾಗಿ ಪತ್ರ ಬರೆಯಲಾಗಿದೆ.